**Akashvani : Bangalore**
**National Bulletin In Kannada**
**31.03.2025 / 13.10 hrs**
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
**31.03.2025 / 13.10 hrs**

**<><*<><>*><>**

ಮುಖ್ಯಾಂಶಗಳು

೧.ಮುಂಬೈನಲ್ಲಿ ನಾಳೆಯಿಂದ ವೇವ್ಸ್ ಶೃಂಗಸಭೆ ; ಜಾಗತಿಕ ಮನರಂಜನೆಯ ಹಲವು ಆಯಾಮಗಳ ಕುರಿತ ಚರ್ಚೆ

೨.ಯುವಕರು ನವೋದ್ಯಮಗಳನ್ನು ಪ್ರಾರಂಭಿಸುವಂತೆ ಕೇಂದ್ರ ಸಚಿವ ಜಿ. ಕಿಶನ್ ರೆಡ್ಡಿ ಕರೆ

೩.ಏಪ್ರಿಲ್ ೧೯ ರಂದು ಜಮ್ಮು-ಕಾಶ್ಮೀರದ ಕಟ್ರಾ-ಬಾರಾಮುಲ್ಲಾ ನಡುವಿನ ಮೊದಲ ವಂದೇ ಭಾರತ್ ಎಕ್ಸ್‌ಪ್ರೆಸ್ ರೈಲಿಗೆ ಪ್ರಧಾನಿ ಹಸಿರು ನಿಶಾನೆ

೪.ಐಪಿಎಲ್ ಟಿ-೨೦ ಕ್ರಿಕೆಟ್ ; ಇಂದು ಮುಂಬೈ ಇಂಡಿಯನ್ಸ್-ಕೊಲ್ಕೊತ್ತಾ ನೈಟ್ ರೈಡರ್ಸ್ ಮುಖಾಮುಖಿ

**<><*<><>*><>**

ವಿಶ್ವ ಶ್ರವಣ ದೃಶ್ಯ ಮತ್ತು ಮನರಂಜನಾ ಶೃಂಗಸಭೆ - ವೇವ್ಸ್ ಮುಂಬೈನಲ್ಲಿ ನಾಳೆ ಆರಂಭವಾಗಲಿದೆ. ನಾಳೆಯಿಂದ ಏಪ್ರಿಲ್ ೪ರವರೆಗೆ ಒಟ್ಟು ನಾಲ್ಕು ದಿನಗಳ ಕಾಲ ನಡೆಯಲಿರುವ ಈ ಶೃಂಗಸಭೆಯಲ್ಲಿ ಮಾಧ್ಯಮಗಳ ಜಾಗತೀಕರಣ ಹಾಗೂ ಸ್ಥಾನೀಕರಣ, ಡಿಜಿಟಲ್ ಜಾಹೀರಾತು ಕ್ಷೇತ್ರದ ಭವಿಷ್ಯ, ಧ್ವನಿ ಮತ್ತು ಸಂಗೀತ ಕ್ಷೇತ್ರದಲ್ಲಿ ಹೊರ ಹೊಮ್ಮುತ್ತಿರುವ ಹೊಸ ಆಯಾಮ ಅನಿಮೇಷನ್, ಗೇಮಿಂಗ್, ಕಾಮಿಕ್ಸ್, ಆಗ್ಮೆಂಟಡ್ ವರ್ಚುವಲ್ ರಿಯಾಲಿಟಿ, ಜನರೇಟಿವ್ ಎಐ, ಮೆಟಾವರ್ಸ್ ಮೊದಲಾದ ತಾಂತ್ರಿಕ ಮುನ್ನಡೆಗಳ ಬಗ್ಗೆ ಚರ್ಚಿಸಲಾಗುತ್ತದೆ. ವೇವ್ಸ್ ಶೃಂಗಸಭೆಯು ಜಗತ್ತಿನಾದ್ಯಂತದ ಸೃಜನಕಾರರಿಗೆ ಪರಿಪೂರ್ಣ ವೇದಿಕೆಯಾಗುವುದಲ್ಲದೆ, ಜಾಗತಿಕ ಮನರಂಜನೆಯ ಭವಿಷ್ಯವನ್ನು ಬದಲಾಯಿಸುವ ವಿಶ್ವದ ಅತ್ಯಂತ ಶಕ್ತಿಶಾಲಿ ಸಭೆಯಾಗಿದೆ. ಅನಿಮೇಷನ್, ಗೇಮಿಂಗ್, ವಿಷುಯಲ್ ಎಫೆಕ್ಟ್ಸ್ ಮತ್ತು ಎಕ್ಸ್‌ಟೆಂಡೆಡ್ ರಿಯಾಲಿಟಿಯಲ್ಲಿ ಹೊಸ ಅವಕಾಶಗಳನ್ನು ಅನ್ವೇಷಿಸಲು ಸೃಜನಕಾರರು, ಉದ್ಯಮಿಗಳು ಮತ್ತು ಹೂಡಿಕೆದಾರರನ್ನು ವೇವ್ಸ್ ಒಟ್ಟುಗೂಡಿಸಲಿದೆ. ಅನಿಮೇಷನ್, ವಿಷುಯಲ್ ಎಫೆಕ್ಟ್ಸ್, ಗೇಮಿಂಗ್, ಕಾಮಿಕ್ಸ್ ಮತ್ತು ಎಕ್ಸ್‌ಟೆಂಡೆಡ್ ರಿಯಾಲಿಟಿ ವಲಯಗಳಲ್ಲಿ ಭಾರತವನ್ನು ಜಾಗತಿಕ ಶಕ್ತಿ ಕೇಂದ್ರವನ್ನಾಗಿ ಮಾಡುವ ದೃಷ್ಟಿಕೋನದೊಂದಿಗೆ, ಈ ಶೃಂಗಸಭೆಯು ಕೌಶಲ್ಯ ಅಭಿವೃದ್ಧಿ, ಉದ್ಯಮಶೀಲತೆ ಮತ್ತು ಗಡಿಯಾಚೆಗಿನ ಸಹಯೋಗಗಳನ್ನು ಉತ್ತೇಜಿಸುವ ಗುರಿಯನ್ನು ಹೊಂದಿದೆ.

**<><*<><>*><>**

ಇಂದು ರಂಜಾನ್ ಹಬ್ಬದ ಹಿನ್ನೆಲೆಯಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಮುಸ್ಲಿಂ ಸಮುದಾಯಕ್ಕೆ ಶುಭಾಶಯಗಳನ್ನು ಕೋರಿದ್ದಾರೆ. ಈದ್-ಉಲ್-ಫಿತರ್, ರಂಜಾನ್ ತಿಂಗಳಲ್ಲಿ ಉಪವಾಸ ಮತ್ತು ಪ್ರಾರ್ಥನೆಯ ಸಂಪನ್ನವನ್ನು ಸೂಚಿಸುತ್ತದೆ. ಈ ಹಬ್ಬವು ಸಹೋದರತ್ವ, ಸಹಕಾರ ಮತ್ತು ಸಹಾನುಭೂತಿಯ ಮನೋಭಾವವನ್ನು ಬಲಪಡಿಸುತ್ತದೆ. ಈ ಹಬ್ಬವು ಸಾಮಾಜಿಕ ಬಾಂಧವ್ಯಗಳನ್ನು ಬೆಳೆಸಲು ಸಹಾಯ ಮಾಡುತ್ತದೆ. ಸಾಮರಸ್ಯ, ಶಾಂತಿಯುತ ಮತ್ತು ಸಮೃದ್ಧ ಸಮಾಜವನ್ನು ಸೃಷ್ಟಿಸಲು ಪ್ರೋತ್ಸಾಹಿಸುತ್ತದೆ ಎಂದು ರಾಷ್ಟ್ರಪತಿಗಳು ತಮ್ಮ ಸಂದೇಶದಲ್ಲಿ ಹೇಳಿದ್ದಾರೆ. ಈ ಹಬ್ಬವು ಎಲ್ಲರಿಗೂ ಶಾಂತಿ, ಪ್ರಗತಿ ಮತ್ತು ಸಂತೋಷವನ್ನು ತರಲಿ ಮತ್ತು ಸಕಾರಾತ್ಮಕ ಮನೋಭಾವದಿಂದ ಮುಂದುವರಿಯಲು ಶಕ್ತಿಯನ್ನು ನೀಡಲಿ ಎಂದು ರಾಷ್ಟ್ರಪತಿಗಳು ಆಶಿಸಿದರು. ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್ ಅವರು ಈದ್-ಉಲ್-ಫಿತರ್ ಹಬ್ಬದ ಶುಭಾಶಯ ಕೋರಿದ್ದಾರೆ. ಸಾಂಸ್ಕೃತಿಕ ವೈವಿಧ್ಯತೆ ಮತ್ತು ವ್ಯಕ್ತಿಗಳನ್ನು ಒಂದುಗೂಡಿಸುವ ಸಾಮಾನ್ಯ ಬಂಧಗಳಿಂದ ಪಡೆದ ಶಕ್ತಿಯ ಜ್ಞಾಪಕಾರ್ಥ ಹಬ್ಬ ಆಚರಿಸಲಾಗುತ್ತದೆ. ಈ ಪವಿತ್ರ ದಿನದ ಸಾರವು ಸರಳ ಆಚರಣೆಯನ್ನು ಮೀರಿ, ರಾಷ್ಟ್ರದ ವೈವಿಧ್ಯಮಯ ಪ್ರಜಾಪ್ರಭುತ್ವಕ್ಕೆ ಅಡಿಪಾಯವಾದ ಏಕತೆ, ಸಹಾನುಭೂತಿ ಮತ್ತು ಪರಸ್ಪರ ಗೌರವದ ಸಾಂವಿಧಾನಿಕ ಆದರ್ಶಗಳನ್ನು ಸಾಕಾರಗೊಳಿಸುತ್ತದೆ ಎಂದು ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್ ಹೇಳಿದ್ದಾರೆ. ಹಬ್ಬದ ಚೈತನ್ಯವು ರಾಷ್ಟ್ರದ ಮುಂದಿನ ಹಾದಿಗೆ ಮಾರ್ಗದರ್ಶನ ನೀಡುವ ಮೌಲ್ಯಗಳಿಗೆ ಮತ್ತೊಮ್ಮೆ ಬದ್ಧರಾಗಲು ಮತ್ತು ಜನರನ್ನು ಒಂದು ಗಮನಾರ್ಹ, ಸ್ಥಿತಿಸ್ಥಾಪಕ ರಾಷ್ಟ್ರವಾಗಿ ಒಗ್ಗೂಡಿಸಲು ವ್ಯಕ್ತಿಗಳನ್ನು ಪ್ರೇರೇಪಿಸಲಿ ಎಂಬ ಆಶಯವನ್ನು ಅವರು ವ್ಯಕ್ತಪಡಿಸಿದ್ದಾರೆ. ರಂಜಾನ್ ಹಬ್ಬದ ಹಿನ್ನೆಲೆಯಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು, ಮುಸ್ಲಿಂ ಸಮುದಾಯಕ್ಕೆ ಶುಭಕೋರಿದ್ದಾರೆ. ಈ ಹಬ್ಬವು ಸಮಾಜದಲ್ಲಿ ಭರವಸೆ, ಸಾಮರಸ್ಯ ಮತ್ತು ದಯೆಯ ಭಾವವನ್ನು ಹೆಚ್ಚಿಸಲಿ. ಪ್ರತಿಯೊಬ್ಬರ ಪ್ರಯತ್ನಗಳಲ್ಲಿ ಸಂತೋಷ ಮತ್ತು ಯಶಸ್ಸು ಸಿಗಲಿ ಎಂದು ಅವರು ಹಾರೈಸಿದ್ದಾರೆ.

<><*<><>*><>

ರಾಷ್ಟ್ರಪತಿ ದ್ರೌಪದಿ ಮುರ್ಮು ಇಂದಿನಿಂದ ಎರಡು ದಿನಗಳು ಮುಂಬೈಗೆ ಭೇಟಿ ನೀಡದ್ದಾರೆ. ರಾಷ್ಟ್ರಪತಿಗಳು ಇಂದು ಸಂಜೆ ಮುಂಬೈ ತಲುಪಲಿದ್ದಾರೆ. ಅವರು ನಾಳೆ ಮುಂಬೈನಲ್ಲಿ ನಡೆಯಲಿರುವ ಭಾರತೀಯ ರಿಸರ್ವ್ ಬ್ಯಾಂಕ್-ಆರ್‌ಬಿಐ ನ ೯೦ನೇ ವಾರ್ಷಿಕೋತ್ಸವದ ಸಮಾರೋಪ ಸಮಾರಂಭದಲ್ಲಿ ಭಾಗವಹಿಸಲಿದ್ದಾರೆ.

<><*<><>*><>

ಜಿಲ್ಲೆಗಳು ಮತ್ತು ಗ್ರಾಮೀಣ ಪ್ರದೇಶದ ಯುವಕರು ನವೋದ್ಯಮಗಳು ಮತ್ತು ಉದ್ಯಮಗಳನ್ನು ಪ್ರಾರಂಭಿಸುವಂತೆ ಕೇಂದ್ರ ಕಲ್ಲಿದ್ದಲು ಗಣಿ ಸಚಿವ ಜಿ. ಕಿಶನ್ ರೆಡ್ಡಿ ಕರೆ ನೀಡಿದ್ದಾರೆ. ಹೈದರಾಬಾದ್‌ನಲ್ಲಿ ಇಂದು ವಿಕಸಿತ ಭಾರತ ಉದ್ಯಮಿಗಳ ಜಾಲದ ಕಚೇರಿಯನ್ನು ಉದ್ಘಾಟಿಸಿದ ನಂತರ ಮಾತನಾಡಿದ ಅವರು, ಪ್ರಧಾನಿ ನರೇಂದ್ರ ಮೋದಿ ಅವರ ನೇತೃತ್ವದಲ್ಲಿ ಕೇಂದ್ರ ಸರ್ಕಾರವು, ಯುವಜನರು ತಮ್ಮದೇ

ಆದ ಉದ್ಯಮಗಳು ಮತ್ತು ನವೋದ್ಯಮಗಳನ್ನು ಹೊಂದಲು ಪ್ರೋತ್ಸಾಹಿಸುತ್ತಿದೆ. ಇದರಿಂದಾಗಿ ೨೦೪೭ರ ವೇಳೆಗೆ ದೇಶವನ್ನು ಅಭಿವೃದ್ಧಿ ಹೊಂದಿದ ದೇಶವನ್ನಾಗಿ ಮಾಡಲು ಅವರು ಹೆಚ್ಚು ಹೆಚ್ಚು ಉದ್ಯೋಗವಕಾಶಗಳನ್ನು ಒದಗಿಸುತ್ತಾರೆ ಎಂದು ಹೇಳಿದರು. ವಿಕಸಿತ ಭಾರತ ಉದ್ಯಮಿಗಳ ಜಾಲದಂತಹ ಸಂಸ್ಥೆಗಳು ಯುವಜನರಿಗೆ ತಮ್ಮದೇ ಆದ ಉದ್ಯಮಗಳನ್ನು ಪ್ರಾರಂಭಿಸಲು ಅಗತ್ಯವಿರುವ ಎಲ್ಲ ಸಹಾಯ, ತರಬೇತಿ, ಜಾಗೃತಿ ಮತ್ತು ಬೆಂಬಲವನ್ನು ಒದಗಿಸುತ್ತಿವೆ. ಇಂತಹ ಪ್ರಯತ್ನಗಳಿಂದ ಯುವಕರು ಪ್ರಯೋಜನ ಪಡೆಯುತ್ತಾರೆ ಎಂದು ಸಚಿವ ಕಿಶನ್ ರೆಡ್ಡಿ ವಿಶ್ವಾಸ ವ್ಯಕ್ತಪಡಿಸಿದರು.

ಧ್ವನಿ : ಕಿಶನ್ ರೆಡ್ಡಿ (೨೬ ಸೆಕೆಂಡ್‌ಗಳು)

<><*<><>*><>

ಜಮ್ಮು-ಕಾಶ್ಮೀರದ ಕಟ್ರಾ-ಬಾರಾಮುಲ್ಲಾ ನಡುವಿನ ಮೊದಲ ವಂದೇ ಭಾರತ್ ಎಕ್ಸ್‌ಪ್ರೆಸ್ ರೈಲಿಗೆ ಏಪ್ರಿಲ್ ೧೯ ರಂದು ಪ್ರಧಾನಿ ನರೇಂದ್ರ ಮೋದಿ ಹಸಿರು ನಿಶಾನೆ ತೋರಲಿದ್ದಾರೆ. ಈ ಮೂಲಕ ಜಮ್ಮುವಿನಿಂದ ಕಾಶ್ಮೀರಕ್ಕೆ ರೈಲು ಸಂಪರ್ಕ ಕಲ್ಪಿಸುವ ೭೦ ವರ್ಷಗಳ ಕನಸು ಈಡೇರಲಿದೆ. ಅಲ್ಲದೇ ಇದು ೨೭೨ ಕಿಲೋಮೀಟರ್ ಉದ್ದದ ಉಧಂಪುರ-ಶ್ರೀನಗರ-ಬಾರಾಮುಲ್ಲಾ ರೈಲು ಸಂಪರ್ಕದ ಪೂರ್ಣಗೊಳ್ಳುವಿಕೆಯನ್ನು ಸೂಚಿಸುತ್ತದೆ. ಈ ರೈಲು ರಿಯಾಸಿ ಜಿಲ್ಲೆಯ ಕಟ್ರಾದಿಂದ ಹೊರಟು ಪಿರ್‌ಪಂಜಾಲ್ ಪರ್ವತದ ಮೂಲಕ ಶ್ರೀನಗರಕ್ಕೆ ಆಗಮಿಸಲಿದೆ. ನಂತರ ಅಂತಿಮವಾಗಿ ಉತ್ತರ ಕಾಶ್ಮೀರದ ಬಾರಾಮುಲ್ಲಾ ತಲುಪಲಿದೆ. ಜಮ್ಮುವಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಕೇಂದ್ರ ಸಚಿವ ಜಿತೇಂದ್ರ ಸಿಂಗ್, ಪ್ರಧಾನಿ ಮೋದಿ ಏಪ್ರಿಲ್ ೧೯ ರಂದು ಉಧಂಪುರಕ್ಕೆ ಆಗಮಿಸಲಿದ್ದಾರೆ. ಅವರು ವಿಶ್ವದ ಅತಿ ಎತ್ತರದ ರೈಲ್ವೆ ಸೇತುವೆಗೆ ಭೇಟಿ ನೀಡಿ, ಅದನ್ನು ಉದ್ಘಾಟಿಸಲಿದ್ದಾರೆ. ನಂತರ, ಅವರು ಕಟ್ರಾದಿಂದ ವಂದೇ ಭಾರತ್ ರೈಲಿಗೆ ಹಸಿರು ನಿಶಾನೆ ತೋರಲಿದ್ದಾರೆ. ಜಮ್ಮು ನಿಲ್ದಾಣವು ನವೀಕರಣ ಹಂತದಲ್ಲಿರುವುದರಿಂದ ಈ ಸೇವೆ ಆರಂಭದಲ್ಲಿ ಕಟ್ರಾದಿಂದ ಚಲಿಸಲಿದೆ ಎಂದು ಮಾಹಿತಿ ನೀಡಿದ್ದಾರೆ. ಸಮಾರಂಭದಲ್ಲಿ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್, ಕೇಂದ್ರ ಸಚಿವ ಡಾ. ಜಿತೇಂದ್ರ ಸಿಂಗ್, ಜಮ್ಮು-ಕಾಶ್ಮೀರ ಲೆಫ್ಟಿನೆಂಟ್ ಗವರ್ನರ್ ಮನೋಜ್ ಸಿನ್ಹಾ ಮತ್ತು ಜಮ್ಮು-ಕಾಶ್ಮೀರ ಮುಖ್ಯಮಂತ್ರಿ ಒಮರ್ ಅಬ್ದುಲ್ಲಾ ಉಪಸ್ಥಿತರಿರಲಿದ್ದಾರೆ. ಇದೇ ವೇಳೆ ಪ್ರಧಾನಿ ನರೇಂದ್ರ ಮೋದಿ ಅವರು, ಕಟ್ರಾದ ಮಾತಾ ವೈಷ್ಣೋದೇವಿ ದೇಗುಲಕ್ಕೆ ಭೇಟಿ ನೀಡಲಿದ್ದಾರೆ. ಅಂದು ಮಧ್ಯಾಹ್ನ ಕಟ್ರಾದಲ್ಲಿ ಸಾರ್ವಜನಿಕ ರ್‍ಯಾಲಿಯನ್ನುದ್ದೇಶಿಸಿ ಮಾತನಾಡಲಿದ್ದಾರೆ ಎಂದು ಐಎಎನ್‌ಎಸ್ ಸುದ್ದಿ ಸಂಸ್ಥೆ ವರದಿ ಮಾಡಿದೆ.

<><*<><>*><>

ಏಪ್ರಿಲ್ ೬ರ ರಾಮನವಮಿಯಂದು ತಮಿಳುನಾಡಿನ ರಾಮೇಶ್ವರಂನಲ್ಲಿ ಹೊಸದಾಗಿ ನಿರ್ಮಿಸಲಾದ ಪಂಬನ್ ರೈಲ್ವೆ ಸೇತುವೆಯನ್ನು ಪ್ರಧಾನಿ ನರೇಂದ್ರ ಮೋದಿ ಉದ್ಘಾಟಿಸಲಿದ್ದಾರೆ. ಪಂಬನ್ ರೈಲ್ವೆ ಸೇತುವೆಯು ಪವಿತ್ರ ದ್ವೀಪವಾದ ರಾಮೇಶ್ವರಂಗೆ ಸಂಪರ್ಕವನ್ನು ಕಲ್ಪಿಸುವುದಲ್ಲದೆ, ಸಾವಿರಾರು

ಯಾತ್ರಿಕರು ಮತ್ತು ಪ್ರವಾಸಿಗರಿಗೆ ಪ್ರಯಾಣವನ್ನು ಸುಗಮವಾಗಿಸಲಿದೆ. ಇದೇ ವೇಳೆ ಪ್ರಧಾನಿ ನರೇಂದ್ರ ಮೋದಿ ಅವರು ರಾಮೇಶ್ವರಂನಲ್ಲಿರುವ ಪ್ರಸಿದ್ಧ ರಾಮನಾಥಸ್ವಾಮಿ ದೇವಾಲಯಕ್ಕೆ ಭೇಟಿ ನೀಡುವ ನಿರೀಕ್ಷೆಯಿದ್ದು, ನಂತರ ಸಾರ್ವಜನಿಕ ಸಭೆಯನ್ನು ಉದ್ದೇಶಿಸಿ ಮಾತನಾಡುವ ಸಾಧ್ಯತೆಯಿದೆ.

<><*<><>*><>

ಭೂಕಂಪ ಪೀಡಿತ ಮ್ಯಾನ್ಮಾರ್‌ನ ಉಹ್ಲಾಥೀನ್ ಮಠದಲ್ಲಿ ಸುಮಾರು ೧೭೦ ಸನ್ಯಾಸಿಗಳು ಸಿಲುಕಿಕೊಂಡಿದ್ದಾರೆ. ಅವರನ್ನು ಸುರಕ್ಷಿತವಾಗಿ ಹೊರಗೆ ತರುವ ಕಾರ್ಯಾಚರಣೆಯನ್ನು ಭಾರತದ ರಾಷ್ಟ್ರೀಯ ವಿಪತ್ತು ನಿರ್ವಹಣಾ ಪಡೆ ಸಿಬ್ಬಂದಿ ಕೈಗೊಂಡಿದೆ ಎಂದು ವಿದೇಶಾಂಗ ಸಚಿವಾಲಯ ತಿಳಿಸಿದೆ. ಮ್ಯಾನ್ಮಾರ್‌ನಲ್ಲಿ ಆಪರೇಷನ್ ಬ್ರಹ್ಮದ ಭಾಗವಾಗಿ ೧೧ ಅಂತಸ್ತಿನ ೭ ಕಟ್ಟಡಗಳು ಕುಸಿದಿರುವ ಸ್ಕೈವಿಲ್ಲಾದಲ್ಲಿ ಎನ್‌ಡಿಆರ್‌ಎಫ್ ತಂಡವನ್ನು ನಿಯೋಜಿಸಲು ಪ್ರಯತ್ನಿಸಲಾಗುತ್ತಿದೆ. ಭಾರತೀಯ ಸೇನಾ ತಂಡವು ಇಂದು ಆಸ್ಪತ್ರೆ ಸ್ಥಳಕ್ಕೆ ಭೇಟಿ ನೀಡಲಿದ್ದು, ನಾಳೆ ವೈದ್ಯಕೀಯ ಸೌಲಭ್ಯಗಳನ್ನು ಒದಗಿಸಲಿದೆ ಎಂದು ಸಚಿವಾಲಯ ಮಾಹಿತಿ ನೀಡಿದೆ.

<><*<><>*><>

ಕೇಂದ್ರ ಯುವ ವ್ಯವಹಾರ ಮತ್ತು ಕ್ರೀಡಾ ಸಚಿವಾಲಯವು ನಾಳೆಯಿಂದ ಏಪ್ರಿಲ್ ೩ ರವರೆಗೆ ವಿಕಸಿತ ಭಾರತ ಯುವ ಸಂಸತ್ತನ್ನು ಆಯೋಜಿಸಲಿದೆ. ಪ್ರತಿ ರಾಜ್ಯ ಮತ್ತು ಕೇಂದ್ರಾಡಳಿತ ಪ್ರದೇಶದಿಂದ ೭೫ ಸಾವಿರಕ್ಕೂ ಹೆಚ್ಚು ಯುವಕರು ಮೈ ಭಾರತ್ ಪೋರ್ಟಲ್ ಮೂಲಕ ತಮ್ಮ ವಿಡಿಯೋಗಳನ್ನು ಸಲ್ಲಿಸಿದ್ದಾರೆ. ಇದು ರಾಷ್ಟ್ರದ ಭವಿಷ್ಯವನ್ನು ರೂಪಿಸುವ ತಮ್ಮ ಉತ್ಸಾಹ ಮತ್ತು ಬದ್ಧತೆಯನ್ನು ಪ್ರದರ್ಶಿಸುತ್ತದೆ.

<><*<><>*><>

ಛತ್ತೀಸ್‌ಗಢದ ದಂತೇವಾಡ ಜಿಲ್ಲೆಯಲ್ಲಿ ಭದ್ರತಾ ಪಡೆಗಳು ಮತ್ತು ಮಾವೋವಾದಿಗಳ ನಡುವಿನ ಗುಂಡಿನ ಚಕಮಕಿಯಲ್ಲಿ ಮಹಿಳಾ ಮಾವೋವಾದಿಯೊಬ್ಬರು ಹತರಾಗಿದ್ದಾರೆ. ಬಿಜಾಪುರ-ದಂತೇವಾಡ ಜಿಲ್ಲೆಯ ಗಡಿಯಲ್ಲಿರುವ ಅರಣ್ಯ ಪ್ರದೇಶದಲ್ಲಿ ಭದ್ರತಾ ಪಡೆಗಳ ಜಂಟಿ ಕಾರ್ಯಾಚರಣೆ ವೇಳೆ ಮಾವೋವಾದಿಯನ್ನು ಹೊಡೆದುರುಳಿಸಲಾಯಿತು.

<><*<><>*><>

ಇಸ್ರೇಲ್ ಪ್ರಧಾನಿ ಬೆಂಜಮಿನ್ ನೇತನ್ಯಾಹು ಅವರು, ಇಸ್ರೇಲ್ ನೌಕಾಪಡೆಯ ಮಾಜಿ ಮುಖ್ಯಸ್ಥ ನಿವೃತ್ತ ವೈಸ್ ಅಡ್ಮಿರಲ್ ಎಲಿ ಶರ್ವಿತ್ ಅವರನ್ನು ಇಸ್ರೇಲ್ ಭದ್ರತಾ ಸಂಸ್ಥೆಯ ಮುಂದಿನ ನಿರ್ದೇಶಕರಾಗಿ ನೇಮಿಸಿದ್ದಾರೆ.

<><*<><>*><>

ಮುಂಬೈನ ವಾಂಖೆಡೆ ಕ್ರೀಡಾಂಗಣದಲ್ಲಿ ಇಂದು ನಡೆಯುವ ಇಂಡಿಯನ್ ಪ್ರೀಮಿಯರ್ ಲೀಗ್-ಐಪಿಎಲ್ ಕ್ರಿಕೆಟ್ ಪಂದ್ಯದಲ್ಲಿ ಮುಂಬೈ ಇಂಡಿಯನ್ಸ್ ಮತ್ತು ಕೋಲ್ಕತ್ತಾ ನೈಟ್ ರೈಡರ್ಸ್ ತಂಡಗಳು ಮುಖಾಮುಖಿಯಾಗಿವೆ. ಪಂದ್ಯ ರಾತ್ರಿ ೭.೩೦ಕ್ಕೆ ಆರಂಭವಾಗಲಿದೆ.

<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>

<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ಮಧ್ಯಾಹ್ನ ೧.೩೦ಕ್ಕೆ <>*><>